K.S.R.T.C. ಡಿಪೋ ಪ್ರಾರಂಭಿಸುವುದು

468 (745) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಡಿಪೋ ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು; ಇದುವರೆಗೆ ಇಲಾಖೆಯಿಂದ ಏನು ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :

ಅ) ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಡಿಪೋ ಪ್ರಾರಂಭಿಸಲು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬಹುತೇಕ ಸಾರಿಗೆ ಅವಶ್ಯಕತೆಗಳನ್ನು ಖಾಸಗಿ ಬಸ್ ಮಾಲೀಕರು ನಿರ್ವಹಿಸುತ್ತಿದ್ದು, ರಸ್ತೆ ಸಾರಿಗೆ ನಿಗಮದ ಅವಶ್ಯಕತೆಗಳನ್ನು ತಿಪಟೂರು, ತುರುವೇಕೆರೆ ಹಾಗೂ ತುಮಕೂರು ಘಟಕಗಳಿಂದ ಕಾರ್ಯಾಚರಣೆಗೊಳಿಸಲಾಗುತ್ತಿದೆ. ಮುಂದಿನ ದಿನಗಳ ಸಾರಿಗೆ ಅವಶ್ಯಕತೆಗಳನ್ನು ಪೂರೈಸಲು ನಿವೇಶನವನ್ನು ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಿಸುವುದು

469 (746) ಶ್ರೀ ಸುರೇಶ್ ಬಾಬು. ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಅ) ಹಾಗಿದ್ದಲ್ಲಿ, ಸ್ವಂತ ಕಟ್ಟಡ ನಿರ್ಮಿಸಲು ಏನು ಕ್ರಮಕೈಗೊಳ್ಳ ಲಾಗಿದೆ. ಎಷ್ಟು ಹಣ ಬಿಡುಗಡೆ ಮಾಡಲಾಗಿದೆ.